# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 494 |
| ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾಗಿದ ದಿನಾಂಕ | : | 11.03.2025 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು 24/7 ನೀರು ಸರಬರಾಜುವಿನಲ್ಲಿ ಕಳಪೆ ಕಾಮಗಾರಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | - ಇಲ್ಲ - |
| ಆ) | ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಉದ್ಭವಿಸುವುದಿಲ್ಲ. |
| ಇ) | ನಗರಕ್ಕೆ ಸರಬರಾಜು ಆಗುತ್ತಿರುವ ನೀರು ಸಮಾನಾಂತರವಾಗಿ ಎಲ್ಲರಿಗೂ ಹಂಚಿಕೆಯಾಗಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸಿಂಧನೂರು ನಗರದಲ್ಲಿ 24X7 ಕುಡಿಯುವ ನೀರು ಸರಬರಾಜು ಕಾಮಗಾರಿಯು ಗುತ್ತಿಗೆದಾರರ ವಿಳಂಬದಿಂದಾಗಿ ಸ್ಥಗಿತಗೊಂಡಿರುತ್ತದೆ. ಮಾನ್ಯ ನ್ಯಾಯಾಲಯದಲ್ಲಿ Arbitration ಪ್ರಗತಿಯಲ್ಲಿದ್ದು, ಅಂತಿಮಗೊಂಡ ನಂತರ ನಿಯಮಾನುಸಾರ ಬಾಕಿ ಕಾಮಗಾರಿಗಳನ್ನು ನಗರಸಭೆ ವತಿಯಿಂದ ಪೂರ್ಣಗೊಳಿಸಬೇಕಾಗಿರುತ್ತದೆ.<br><br>ಬಾಕಿ ಕಾಮಗಾರಿಗಳು ಪೂರ್ಣಗೊಂಡ ನಂತರ ನಗರದ ಎಲ್ಲಾ ನಿವಾಸಿಗಳಿಗೆ ಸಮಾನಾಂತರವಾಗಿ ಕುಡಿಯುವ ನೀರು ಹಂಚಿಕೆ ಮಾಡಲು ಸಾಧ್ಯವಾಗುತ್ತದೆ.<br><br>ನಗರಸಭೆಯವರು ಹಾಲಿ ಇರುವ ವಿತರಣಾ ಜಾಲದ ಮೂಲಕ ಬಳಕೆದಾರರಿಗೆ ಕುಡಿಯುವ ನೀರು ಪೂರೈಸುತ್ತಿರುತ್ತಾರೆ.<br><br>ವಿಧ್ಯುತ್ ವ್ಯತ್ಯಯ ಉಂಟಾದಾಗ, ಪಂಪು ಮೋಟರ್ ದುರಸ್ಥಿಯಲ್ಲಿದ್ದಾಗ ಕೊಳವೆ ಮಾರ್ಗದಲ್ಲಿ ತಾಂತ್ರಿಕ ಸಮಸ್ಯೆ ಕಂಡು ಬಂದಾಗ ತುರ್ತಾಗಿ ಟ್ಯಾಂಕರ್ ಮೂಲಕ ಕುಡಿಯುವ ನೀರನ್ನು ನಗರಸಭೆಯಿಂದ ಒದಗಿಸುತ್ತಾರೆ. |
| ಈ) | ಸಿಂಧನೂರಿಗೆ ನೀರು ಸರಬರಾಜು ಮಾಡಲು ಡಿ.ಪಿ.ಎ.ಆರ್. ನಲ್ಲಿ ಎಷ್ಟು ಎಕರೆ ಕಾಯ್ದಿರಿಸಲಾಗಿದೆ? | ಸಿಂಧನೂರು ನಗರಕ್ಕೆ ಕುಡಿಯುವ ನೀರನ್ನು ಸಂಗ್ರಹಿಸಲು 2044ನೇ ಇಸವಿಯ ಬೇಡಿಕೆಗೆ ಅನುಸಾರ ಬೇಕಾದ 259.6 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. |

ಕಡತ ಸಂಖ್ಯೆ:ನಅಇ 41 ಪಿಆರ್‌ಜೆ 2025

(ಬಿ. ಎಸ್. ಸುರೇಶ)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು